ಉದಯಕಾಲ

# ವಿಧಾನ ಮಂಡಲ ಅಧಿವೇಶನ ಸಚಿವರ ಹಾಜರಾತಿ ಕಡ್ಡಾಯ

## ಸೂಚನೆಗೆ ಸಿಎಂಗೆ ಸಭಾಪತಿ ಹೊರಟ್ಟಿ ಆಗ್ರಹ

ಉದಯಕಾಲ ನ್ಯೂಸ್

**ಬೆಂಗಳೂರು:** ಸೋಮವಾರದಿಂದ ಹತ್ತು ದಿನಗಳ ಕಾಲ ವಿಧಾನಮಂಡಲದ ಅಧಿವೇಶನ ನಡೆಯಲಿದ್ದು, ಸದನ ಕಲಾಪಗಳ ಸಂದರ್ಭದಲ್ಲಿ ಸಚಿವರು ಕಡ್ಡಾಯವಾಗಿ ಪಾಲ್ಗೊಳ್ಳುವಂತೆ ಸಚಿವ ಸಂಪುಟದ ಸಹೋದ್ಯೋಗಿಗಳಿಗೆ ಸೂಚನೆ ನೀಡುವಂತೆ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರನ್ನು ಕೋರಿದ್ದಾರೆ.

ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ವಿಧಾನ ಮಂಡಲದ ಅಧಿವೇಶನ ಬಹುಮುಖ್ಯವಾಗಿದ್ದು, ನಾಡಿನ ಜ್ವಲಂತ ಸಮಸ್ಯೆಗಳ ಬಗ್ಗೆ ಹಾಗೂ ಸಾರ್ವಜನಿಕರ ಸಂಕಷ್ಟಗಳ ಕುರಿತು ಚರ್ಚೆ ನಡೆಸಿ ಪರಿಹಾರ ಕಂಡುಕೊಳ್ಳಲು ಅಧಿವೇಶನ ಸೂಕ್ತ ವೇದಿಕೆಯಾಗಿದೆ. ಹೀಗಾಗಿ, ಶಾಸನಸಭೆಯ ಕಲಾಪಗಳು ನಡೆಯುವಾಗ ಸಚಿವರು ಸದನದಲ್ಲಿ ಕಡ್ಡಾಯವಾಗಿ ಹಾಜರಿರಬೇಕು ಎಂದು ಸೂಚನೆ ನೀಡುವಂತೆ ಮುಖ್ಯಮಂತ್ರಿಗಳಿಗೆ ಸಭಾಪತಿ ಕೋರಿದ್ದಾರೆ.

ಈ ಹಿಂದೆ ನಡೆದಿರುವ ಅಧಿವೇಶನಗಳ ಸಂದರ್ಭದಲ್ಲಿ ಹಲವು ಸಚಿವರು, ತಮ್ಮ ಕ್ಷೇತ್ರಕ್ಕೆ ಸಂಬಂಧಿತ ಕಾರ್ಯಗಳ ಕಾರಣದ ಮೇಲೆ ಸದನಕ್ಕೆ ಗೈರುಹಾಜರಾಗುವ ಕುರಿತು ಅನುಮತಿ ಕೋರುತ್ತಿದ್ದರು. ಸಾರ್ವಜನಿಕ ಮಹತ್ವದ ವಿಚಾರಗಳ ಬಗ್ಗೆ ಸದನದಲ್ಲಿ ಕೇಳುವ ಪ್ರಶ್ನೆಗಳಿಗೆ ಸಂಬಂಧಿತ ಸಚಿವರು ಉತ್ತರ ನೀಡಬೇಕಾಗಿರುವುದು ಅವರ ಕರ್ತವ್ಯ ಹಾಗೂ ಜವಾಬ್ದಾರಿ. ಆದರೆ, ಚರ್ಚೆ ವೇಳೆ ಸಚಿವರು ಸದನದಲ್ಲಿ ಇಲ್ಲದೇ ಇರುವುದರಿಂದ ಸಂಬಂಧಪಟ್ಟ ಪ್ರಶ್ನೆಗೆ ಸಮರ್ಪಕ ಉತ್ತರ ದೊರೆಯದೇ ಸಮಸ್ಯೆಗೆ ಸೂಕ್ತ ಪರಿಹಾರ ಸಿಗುವುದಿಲ್ಲ.

ಪುಟ 07



## ವಿಧಾನಸಭೆ ಕಾರ್ಯಕಲಾಪ ಲೋಕಸಭೆ ಮಾದರಿಯಲ್ಲಿ ಚಿತ್ರೀಕರಿಸಿ ನೇರ ಪ್ರಸಾರ

**ಬೆಂಗಳೂರು:** ಕರ್ನಾಟಕ ವಿಧಾನ ಸಭೆಯ ಅಧಿವೇಶನ ಈ ತಿಂಗಳ 13 ರಿಂದ ಆರಂಭವಾಗಲಿದ್ದು, ಅಧಿವೇಶನದ ಕಾರ್ಯಕಲಾಪಗಳನ್ನು ಲೋಕಸಭೆಯ ಮಾದರಿಯಲ್ಲಿ ಚಿತ್ರೀಕರಿಸಿ ನೇರ ಪ್ರಸಾರ ಮಾಡಲು ಹಾಗೂ ಚಿತ್ರೀಕರಿಸಿದ ದೃಶ್ಯಗಳನ್ನು ಇತರೆ ಖಾಸಗಿ ಚಾನೆಲ್‌ಗಳಿಗೆ ಸ್ಯಾಟಲೈಟ್ ಮೂಲಕ ಸಂಪರ್ಕ ಒದಗಿಸುವ ಕಾರ್ಯವನ್ನು ಬೆಂಗಳೂರು ದೂರದರ್ಶನ ಕೇಂದ್ರಕ್ಕೆ ಹಾಗೂ ಅದೇ ರೀತಿ ಸದನದ ಕಾರ್ಯಕಲಾಪಗಳ ಛಾಯಾಚಿತ್ರಗಳನ್ನು ತೆಗೆದು ಮುದ್ರಣ ಮಾಧ್ಯಮದವರಿಗೆ ಒದಗಿಸುವ ಕಾರ್ಯವನ್ನು ವಾರ್ತಾ ಇಲಾಖೆಗೆ ವಹಿಸಲಾಗಿದೆ.

ಬೆಂಗಳೂರು ದೂರದರ್ಶನ ಕೇಂದ್ರ ಚಿತ್ರೀಕರಿಸಿದ ವಿಧಾನಸಭೆಯ ಕಾರ್ಯಕಲಾಪಗಳ ಔಟ್‌ಪುಟ್ ಅನ್ನು ಖಾಸಗಿ ಸುದ್ದಿವಾಹಿನಿಗಳು ಪಡೆದುಕೊಳ್ಳಬೇಕು.

ಪುಟ 07


ಉದಯಕಾಲ

# ವಿಧಾನ ಮಂಡಲ ಅಧಿವೇಶನ ಸಚಿವರ ಹಾಜರಾತಿ ಕಡ್ಡಾಯ

## ಸೂಚನೆಗೆ ಸಿಎಂಗೆ ಸಭಾಪತಿ ಹೊರಟ್ಟಿ ಆಗ್ರಹ

ಉದಯಕಾಲ ನ್ಯೂಸ್

**ಬೆಂಗಳೂರು:** ಸೋಮವಾರದಿಂದ ಹತ್ತು ದಿನಗಳ ಕಾಲ ವಿಧಾನ ಮಂಡಲದ ಅಧಿವೇಶನ ನಡೆಯಲಿದ್ದು, ಸದನ ಕಲಾಪಗಳ ಸಂದರ್ಭದಲ್ಲಿ ಸಚಿವರು ಕಡ್ಡಾಯವಾಗಿ ಪಾಲ್ಗೊಳ್ಳುವಂತೆ ಸಚಿವ ಸಂಪುಟದ ಸಹೋದ್ಯೋಗಿಗಳಿಗೆ ಸೂಚನೆ ನೀಡುವಂತೆ ವಿಧಾನ ಪರಿಷತ್ತಿನ ಸಭಾಪತಿ ಬಸವರಾಜ ಹೊರಟ್ಟಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರನ್ನು ಕೋರಿದ್ದಾರೆ.



ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ವಿಧಾನ ಮಂಡಲದ ಅಧಿವೇಶನ ಬಹುಮುಖ್ಯ ವಾಗಿದ್ದು, ನಾಡಿನ ಜ್ವಲಂತ ಸಮಸ್ಯೆಗಳ ಬಗ್ಗೆ ಹಾಗೂ ಸಾರ್ವಜನಿಕರ ಸಂಕಷ್ಟಗಳ ಕುರಿತು ಚರ್ಚೆ ನಡೆಸಿ ಪರಿಹಾರ ಕಂಡುಕೊಳ್ಳಲು ಅಧಿವೇಶನ ಸೂಕ್ತ ವೇದಿಕೆ ಯಾಗಿದೆ. ಹೀಗಾಗಿ, ಶಾಸನ ಸಭೆಯ ಕಲಾಪಗಳು ನಡೆಯುವಾಗ ಸಚಿವರು ಸದನದಲ್ಲಿ ಕಡ್ಡಾಯವಾಗಿ ಹಾಜರಿರ ಬೇಕು ಎಂದು ಸೂಚನೆ ನೀಡುವಂತೆ ಮುಖ್ಯಮಂತ್ರಿಗಳಿಗೆ ಸಭಾಪತಿ ಕೋರಿದ್ದಾರೆ.

ಈ ಹಿಂದೆ ನಡೆದಿರುವ ಅಧಿವೇಶನಗಳ ಸಂದರ್ಭದಲ್ಲಿ ಹಲವು ಸಚಿವರು, ತಮ್ಮ ಕ್ಷೇತ್ರಕ್ಕೆ ಸಂಬಂಧಿತ ಕಾರ್ಯಗಳ ಕಾರಣದ ಮೇಲೆ ಸದನಕ್ಕೆ ಗೈರುಹಾಜರಾಗುವ ಕುರಿತು ಅನುಮತಿ ಕೋರುತ್ತಿದ್ದರು. ಸಾರ್ವಜನಿಕ ಮಹತ್ವದ ವಿಚಾರಗಳ ಬಗ್ಗೆ ಸದನದಲ್ಲಿ ಕೇಳುವ ಪ್ರಶ್ನೆಗಳಿಗೆ ಸಂಬಂ ಧಿತ ಸಚಿವರು ಉತ್ತರ ನೀಡಬೇಕಾಗಿ ರುವುದು ಅವರ ಕರ್ತವ್ಯ ಹಾಗೂ ಜವಾ ಬ್ದಾರಿ. ಆದರೆ, ಚರ್ಚೆ ವೇಳೆ ಸಚಿವರು ಸದನದಲ್ಲಿ ಇಲ್ಲದೇ ಇರುವುದರಿಂದ ಸಂಬಂಧಪಟ್ಟ ಪ್ರಶ್ನೆಗೆ ಸಮರ್ಪಕ ಉತ್ತರ ದೊರೆಯದೇ ಸಮಸ್ಯೆಗೆ ಸೂಕ್ತ ಪರಿಹಾರ ಸಿಗುವುದಿಲ್ಲ. ಸಚಿವರ ಗೈರಿನಿಂದಾಗಿ ಕಲಾಪ ನಡೆಸುವ ಉದ್ದೇಶ ಸಾಫಲ್ಯ ಗೊಳ್ಳುವುದಿಲ್ಲ ಎಂದು ಸಭಾಪತಿ ಹೊರಟ್ಟಿ ಅಭಿಪ್ರಾಯ ಪಟ್ಟಿದ್ದಾರೆ.

ಸಚಿವರ ಅನುಪಸ್ಥಿತಿ, ಆಡಳಿತಾರೂಢ ಸರಕಾರದಿಂದ ಉತ್ತರ ಪಡೆಯುವ ಸದಸ್ಯರ ಹಕ್ಕು ಮತ್ತು ಅವಕಾಶವನ್ನು ವಂಚಿಸಿದಂತಾಗುತ್ತದೆ. ಆದಕಾರಣ ಸಚಿವರು ಸದನದಲ್ಲಿ ಹಾಜರಿರುವುದನ್ನು ಖಾತ್ರಿಪಡಿಸಿಕೊಳ್ಳುವಂತೆ ಮುಖ್ಯಮಂತ್ರಿ ಬೊಮ್ಮಾಯಿಗೆ ಸಭಾಪತಿ ಬಸವರಾಜ ಹೊರಟ್ಟಿ ಆಗ್ರಹಿಸಿದ್ದಾರೆ.

ಇನ್ನು ಮಂತ್ರಿಮಂಡಲದ ಎಲ್ಲಾ ಸದಸ್ಯರು ಸಹ ಸ್ವಯಂಪ್ರೇರಿತರಾಗಿ ಕಡ್ಡಾ ಯವಾಗಿ ಸದನದ ಕಾರ್ಯ ಕಲಾಪಗಳಲ್ಲಿ ಪಾಲ್ಗೊಳ್ಳುವ ಮೂಲಕ ತಮ್ಮ ಜವಾಬ್ದಾರಿ ನಿರ್ವಹಿಸುವಂತೆ ಸೂಚಿಸಿರುವ ಸಭಾಪತಿ ಬಸವರಾಜ ಹೊರಟ್ಟಿ, ಅಧಿವೇಶನದ ವೇಳೆ ತಮ್ಮ ಕ್ಷೇತ್ರಗಳ ಕಾರ್ಯಕ್ರಮ ಗಳನ್ನು ಉಲ್ಲೇಖಿಸಿ ಸದನ ಕಲಾಪದಿಂದ ವಿನಾಯಿತಿ ಕೋರಿ ಮನವಿ ಸಲ್ಲಿಸದಂತೆ ಎಲ್ಲಾ ಸಚಿವರಿಗೆ ತಿಳಿಸಿದ್ದಾರೆ.

ಅಧಿವೇಶನದ ಯಶಸ್ವಿಯಲ್ಲಿ ಕೇವಲ ಸಚಿವರ ಹಾಗೂ ಶಾಸಕರ ಪಾತ್ರವಿರದೇ ಸಂಬಂಧಿಸಿದ ಇಲಾಖೆಗಳ ಅಧಿಕಾರಿಗಳ ಪಾಲ್ಗೊಳ್ಳುವಿಕೆಯೂ ಅಷ್ಟೇ ಪ್ರಮುಖವಾಗಿದೆ. ಹೀಗಾಗಿ, ಚರ್ಚೆಯ ವೇಳೆ ಸದನ ದಲ್ಲಿ ಅಧಿಕಾರಿಗಳ ಉಪಸ್ಥಿತಿ ಕುರಿತು ಮುಖ್ಯಕಾರ್ಯದರ್ಶಿಗಳು ಗಮನಹರಿಸ ಬೇಕೆಂದು ಸೂಚಿಸಿದ್ದಾರೆ.

ವಿಧಾನ ಪರಿಷತ್ತಿನ ಅಧಿವೇಶನದ ಕಲಾಪದಲ್ಲಿ ಆಯಾ ದಿನದಲ್ಲಿ ಹಾಜರಾಗುವ ಸಚಿವರ ಹಾಗೂ ಅಧಿಕಾರಿಗಳ ಹೆಸರನ್ನು ಆಯಾ ದಿನದ ಸದನ ಆರಂಭಗೊಳ್ಳುವಾಗಲೇ ಪ್ರಕಟಿಸಲಾಗುವುದು.

ಜೊತೆಗೆ ಗೈರು ಹಾಜರಾದವರ ಮಾಹಿತಿಯನ್ನು ಸಂಬಂಧಿಸಿದವರಿಗೆ ಕಳುಹಿಸಿ ಕ್ರಮಕ್ಕೆ ಸೂಚಿಸಲಾಗುವುದು ಎಂದು ತಿಳಿಸಿದ್ದಾರೆ.

## ವಿಧಾನಸಭೆ ಕಾರ್ಯಕಲಾಪ ಲೋಕಸಭೆ ಮಾದರಿಯಲ್ಲಿ ಚಿತ್ರೀಕರಿಸಿ ನೇರ ಪ್ರಸಾರ

ಬೆಂಗಳೂರು: ಕರ್ನಾಟಕ ವಿಧಾನಸಭೆಯ ಅಧಿವೇಶನ ಈ ತಿಂಗಳ 13ರಿಂದ ಆರಂಭವಾಗಲಿದ್ದು, ಅಧಿವೇಶನದ ಕಾರ್ಯಕಲಾಪಗಳನ್ನು ಲೋಕಸಭೆಯ ಮಾದರಿಯಲ್ಲಿ ಚಿತ್ರೀಕರಿಸಿ ನೇರ ಪ್ರಸಾರ ಮಾಡಲು ಹಾಗೂ ಚಿತ್ರೀಕರಿಸಿದ ದೃಶ್ಯಗಳನ್ನು ಇತರೆ ಖಾಸಗಿ ಚಾನೆಲ್‌ಗಳಿಗೆ ಸ್ಯಾಟಲೈಟ್ ಮೂಲಕ ಸಂಪರ್ಕ ಒದಗಿಸುವ ಕಾರ್ಯವನ್ನು ಬೆಂಗಳೂರು ದೂರದರ್ಶನ ಕೇಂದ್ರಕ್ಕೆ ಹಾಗೂ ಅದೇ ರೀತಿ ಸದನದ ಕಾರ್ಯಕಲಾಪಗಳ ಛಾಯಾಚಿತ್ರಗಳನ್ನು ತೆಗೆದು ಮುದ್ರಣ ಮಾಧ್ಯಮದವರಿಗೆ ಒದಗಿಸುವ ಕಾರ್ಯವನ್ನು ವಾರ್ತಾ ಇಲಾಖೆಗೆ ವಹಿಸಲಾಗಿದೆ.ಬೆಂಗಳೂರು ದೂರದರ್ಶನ ಕೇಂದ್ರ ಚಿತ್ರೀಕರಿಸಿದ ವಿಧಾನಸಭೆಯ ಕಾರ್ಯಕಲಾಪಗಳ ಔಟ್‌ಪುಟ್ ಅನ್ನು ಖಾಸಗಿ ಸುದ್ದಿವಾಹಿನಿಗಳು ಪಡೆದುಕೊಳ್ಳಬೇಕು.ಸದನದ ಕಾರ್ಯಕಲಾಪಗಳನ್ನು ವರದಿ ಮಾಡುವ ವರದಿಗಾರರಿಗೆ ಮಾತ್ರ ಈ ಬಾರಿಯೂ ಸಭಾಂಗಣದ ಎರಡನೇ ಮಹಡಿಯಲ್ಲಿರುವ ಪತ್ರಕರ್ತರ ಗ್ಯಾಲರಿಗೆ ಪ್ರವೇಶಿಸಲು ಅವಕಾಶವಿರುತ್ತದೆ. ಆದರೆ, ಖಾಸಗಿ ಸುದ್ದಿ ವಾಹಿನಿಗಳ ಕ್ಯಾಮೆರಾಮೆನ್ ಹಾಗೂ ಮುದ್ರಣ ಮಾಧ್ಯಮದ ಛಾಯಾಗ್ರಾಹಕರಿಗೆ ವಿಧಾನಸಭೆಯ ಸಭಾಂಗಣದೊಳಗೆ ಅಥವಾ ಎರಡನೇ ಮಹಡಿಯ ಪತ್ರಕರ್ತರ ಗ್ಯಾಲರಿಗೆ ಪ್ರವೇಶಾಕಾಶ ಇರುವುದಿಲ್ಲ. ವರದಿಗಾರರು ಸದನದ ಒಳಗೆ ಮೊಬೈಲ್ ದೂರವಾಣಿ, ಟ್ಯಾಬ್ ಇತ್ಯಾದಿಗಳನ್ನು ಕೊಂಡೊಯ್ಯಬಾರದು ವಿಧಾನಸಭೆ ಸಚಿವಾಲಯದ ನಿರ್ದೇಶಕರ ಅಧಿಕೃತ ಪ್ರಕಟಣೆ ತಿಳಿಸಿದೆ.